# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 1466 (1705)

0ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾ.ದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮಾನ್ಯ ಕೃಷಿ ಸಚಿವರು

ವಿಷಯ : ಕೃಷಿ ಕಾರ್ಯದಲ್ಲಿ ತೊಡಗಿರುವ ರೈತರಿಗೆ ಆಕಸ್ಮಿಕ ಅವಘಡ ಸಂಭವಿಸಿದಾಗ ಪರಿಹಾರ ಧನ ಒದಗಿಸುವ ಕುರಿತು

(ಅ) ರೈತರು ಕೃಷಿ ಚಟುವಟಿಕೆಯಲ್ಲಿ ತೊಡಗಿರುವಾಗ ಆಕಸ್ಮಿಕ ಅವಘಡಗಳು ಸಂಭವಿಸಿದಾಗ ಇಲಾಖೆಯಿಂದ ನೀಡಲಾಗುವ ಪರಿಹಾರ ಧನ ಪಡೆಯಲು ಅಗತ್ಯವಾದ ಮಾನದಂಡಗಳು ಯಾವುವು ; ಯಾವ ಯಾವ ಪ್ರಕರಣಗಳಿಗೆ ಪರಿಹಾರ ಧನವನ್ನು ನೀಡಲಾಗುತ್ತದೆ ; (ಸುತ್ತೋಲೆ ಪ್ರತಿಯನ್ನು ಒದಗಿಸುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಪರಿಹಾರ ಕೋರಿ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಮಂಜೂರಾತಿ ನೀಡಿದ ಮತ್ತು ಮಂಜೂರಾತಿ ನೀಡದ ಅರ್ಜಿಗಳ ಸಂಖ್ಯೆ ಎಷ್ಟು; ಮಂಜೂರಾತಿಯಾಗಿ ಪರಿಹಾರ ಧನ ನೀಡಲು ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಅರ್ಜಿಯನ್ನು ಮಂಜೂರಾತಿ ನೀಡದೇ ಇರಲು ಕಾರಣವೇನು

(ಇ) ಗ್ರಾಮೀಣ ಭಾಗದಲ್ಲಿ ಕೃಷಿ ಚಟುವಟಿಕೆಯಲ್ಲಿ ತೊಡಗಿರುವ ರೈತರು ಮಾಹಿತಿಯ ಕೊರತೆಯಿಂದ ಪರಿಹಾರ ಅರ್ಜಿಯನ್ನು ಸಕಾಲದಲ್ಲಿ ಸಲ್ಲಿಸದ ಕಾರಣಕ್ಕಾಗಿ ಮಂಜೂರಾತಿಯನ್ನು ನೀಡದ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು) ನೈಜ ಪ್ರಕರಣಗಳಲ್ಲಿ ಕಾಲಮಿತಿಯ ವಿನಾಯಿತಿಗೆ ಪ್ರಾಧಿಕಾರ ನೇಮಿಸುವ ಬಗ್ಗೆ ಸರಕಾರದ ಕ್ರಮವೇನು?